12-13

## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** M/s. J.N. Investments & Trading Co. Pvt. Ltd. ಕಂಪನಿಯವರಿಗೆ ಮಂಜೂರಾಗಿರುವ 27.2 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು 77.6 ಮೆ.ವ್ಯಾ ಸಾಮರ್ಥ್ಯಕ್ಕೆ ಹೆಚ್ಚಿಸುವ ಬಗ್ಗೆ.

**ಓದಲಾಗಿದೆ:**
1) ಸರ್ಕಾರಿ ಆದೇಶ ಸಂಖ್ಯೆ: ಡಿಇ 41 ಎನ್‌ಸಿಇ 2006 ದಿನಾಂಕ: 20.04.2006.
2) ಸರ್ಕಾರಿ ಆದೇಶ ಸಂಖ್ಯೆ: ಇಎನ್ 400 ಎನ್‌ಸಿಇ 2010(1) ದಿನಾಂಕ: 27.09.2010.
3) ಸರ್ಕಾರಿ ಆದೇಶ ಸಂಖ್ಯೆ: ಇಎನ್ 148 ಎನ್‌ಸಿಇ 2011 ದಿನಾಂಕ: 23.03.2011.
4) ಸರ್ಕಾರಿ ಆದೇಶ ಸಂಖ್ಯೆ: ಇಎನ್ 148 ಎನ್‌ಸಿಇ 2011 ದಿನಾಂಕ: 04.7.2011.
5) ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ, ವ್ಯವಸ್ಥಾಪಕ ನಿರ್ದೇಶಕರ ಪತ್ರ ಸಂಖ್ಯೆ: ಕೆಆರ್‌ಇಡಿ/08/J.N.I(27.2 MW to 77.6 MW)/ 2012/2819 ದಿನಾಂಕ: 02.11.2012.
6) ದಿನಾಂಕ 03.11.2012ರಂದು ನಡೆದ ಹಂಚಿಕೆ ಸಮಿತಿ ಸಭೆಯ ನಡವಳಿಗಳು.

* * *

**ಪ್ರಸ್ತಾವನೆ:-**

ಮೇಲೆ ಕ್ರಮ ಸಂಖ್ಯೆ (1) ರಲ್ಲಿ ಓದಲಾದ ಸರ್ಕಾರಿ ಆದೇಶದಲ್ಲಿ M/s. J.N. Investments & Trading Co. Pvt. Ltd. ಕಂಪನಿಗೆ ಧಾರವಾಡ ಮತ್ತು ಗದಗ ಜಿಲ್ಲೆಗಳ ವಿವಿಧ ಪ್ರದೇಶಗಳಲ್ಲಿ ಒಟ್ಟು 84.84. ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಕೆಲವೊಂದು ನಿಬಂಧನೆಗೊಳಪಟ್ಟು ಹಂಚಿಕೆ ಮಾಡಲಾಗಿತ್ತು. ಮೇಲಿನ ಒಟ್ಟು ಸಾಮರ್ಥ್ಯದಲ್ಲಿ ಗದಗ್ ಜಿಲ್ಲೆಯ ಅಡವಿಸೋಮಾಪುರ, ಕಳಸಪುರ, ಮಲಸಮುದ್ರ ಗ್ರಾಮಗಳಲ್ಲಿ ಹಂಚಿಕೆಯಾಗಿದ್ದ ಭಾಗಶಃ ಸಾಮರ್ಥ್ಯವಾದ 6.93 ಮೆ.ವ್ಯಾ. ಸಾಮರ್ಥ್ಯವನ್ನು 8.00 ಮೆ.ವ್ಯಾ.ಗೆ ಮೇಲೆ ಕ್ರಮ ಸಂಖ್ಯೆ (2) ರಲ್ಲಿ ಓದಲಾದ ಸರ್ಕಾರಿ ಆದೇಶದಲ್ಲಿ ಹೆಚ್ಚಿಸಿ ಆದೇಶಿಸಲಾಗಿತ್ತು. ಸದರಿ ಸಾಮರ್ಥ್ಯವನ್ನು ಮೇಲೆ ಕ್ರಮ ಸಂಖ್ಯೆ (3) ಹಾಗೂ (4)ರಲ್ಲಿ ಓದಲಾಗಿರುವ ಆದೇಶಗಳಲ್ಲಿ ಕ್ರಮವಾಗಿ 15.2 ಮೆ.ವ್ಯಾ. ಸಾಮರ್ಥ್ಯಕ್ಕೆ ಹಾಗೂ 27.2 ಮೆ.ವ್ಯಾ. ಸಾಮರ್ಥ್ಯಕ್ಕೆ ಹೆಚ್ಚಿಸಿ ಆದೇಶಿಸಲಾಗಿತ್ತು.

ಮೇಲೆ ಕ್ರಮ ಸಂಖ್ಯೆ (5) ರಲ್ಲಿ ಓದಲಾದ ಪತ್ರದಲ್ಲಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರು M/s. J.N. Investments & Trading Co. Pvt. Ltd. ಕಂಪನಿಯವರಿಗೆ ಸರ್ಕಾರದ ವಿವಿಧ ಆದೇಶಗಳಲ್ಲಿ ಗದಗ್ ಜಿಲ್ಲೆಯ ಅಡವಿಸೋಮಾಪುರ, ಕಳಸಪುರ, ಮಲಸಮುದ್ರ ಗ್ರಾಮಗಳಲ್ಲಿ ಮಂಜೂರಾಗಿರುವ 27.2 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯು ಈಗಾಗಲೇ ಅನುಷ್ಠಾನಗೊಂಡಿದ್ದು, ಸದರಿ ಸಾಮರ್ಥ್ಯವನ್ನು 77.6 ಮೆ.ವ್ಯಾ. ಸಾಮರ್ಥ್ಯಕ್ಕೆ ಹೆಚ್ಚಿಸಲು ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ ಅಲ್ಲದೆ ಸಾಮರ್ಥ್ಯ ಹೆಚ್ಚಳಕ್ಕೆ ಸಂಬಂಧಿಸಿದಂತೆ ಅಭಿವೃದ್ಧಿದಾರರು ರೂ. 55.44 ಲಕ್ಷಗಳ ಶುಲ್ಕ ಪಾವತಿಸಿರುತ್ತಾರೆಂದು ತಿಳಿಸಿರುತ್ತಾರೆ ಹಾಗೂ ಸಾಮರ್ಥ್ಯ ಹೆಚ್ಚಳಗೊಳ್ಳಲಿರುವ 50.4 ಸಾಮರ್ಥ್ಯವನ್ನು ದಿನಾಂಕ 31.3.2013ರೊಳಗಾಗಿ ಅನುಷ್ಠಾನಗೊಳಿಸುವುದಾಗಿ ಹಾಗೂ ಉತ್ಪಾದನೆ ಆಗುವ ವಿದ್ಯುತ್ತನ್ನು ಪಿಪಿಎ ಮೂಲಕ ಸಂಬಂಧಿಸಿದ ಎಸ್ಕಾಂಗೆ ಸರಬರಾಜು ಮಾಡಲಾಗುವುದೆಂದು ವರದಿ ಮಾಡಿರುತ್ತಾರೆ.

ಮೇಲೆ ಕ್ರಮ ಸಂಖ್ಯೆ (6)ರಲ್ಲಿ ಓದಲಾದ ಹಂಚಿಕೆ ಸಮಿತಿ ಸಭೆಯು ಸದರಿ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಶಿಫಾರಸ್ಸು ಮಾಡಿರುತ್ತದೆ. ಆದುದರಿಂದ ಈ ಕೆಳಗಿನಂತೆ ಆದೇಶಿಸಲಾಗಿದೆ:-

**ಸರ್ಕಾರಿ ಆದೇಶ ಸಂಖ್ಯೆ: ಇಎನ್ 333 ಎನ್‌ಸಿಇ 2012,**
**ಬೆಂಗಳೂರು, ದಿನಾಂಕ: 12-02-2013**

M/s. J.N. Investments & Trading Co. Pvt. Ltd. ಇವರಿಗೆ ಗದಗ್ ಜಿಲ್ಲೆಯ ಅಡವಿಸೋಮಾಪುರ, ಕಳಸಪುರ, ಮಲಸಮುದ್ರ ಗ್ರಾಮಗಳಲ್ಲಿ ಮಂಜೂರಾಗಿರುವ 27.2 ಮೆ.ವ್ಯಾ ಪವನ ವಿದ್ಯುತ್ ಯೋಜನೆಯ ಸಾಮರ್ಥ್ಯವನ್ನು 77.6 ಮೆ.ವ್ಯಾ. ಸಾಮರ್ಥ್ಯಕ್ಕೆ ಈ ಕೆಳಗಿನ ಶೆಡ್ಯೂಲ್‌ನಲ್ಲಿ ವಿವರಿಸಿರುವಂತೆ ಹಾಗೂ ಕೆಳಕಂಡ ಷರತ್ತಿಗೊಳಪಟ್ಟು ಹೆಚ್ಚಿಸಿ ಆದೇಶಿಸಿದೆ.

| Near by villages of the proposed area and District | Geographical Area Details of the Project | Sanctioned capacity in MW | Enhancement Proposed in MW | No. of WTGs & rating in KW | Total capacity including proposed enhancement in MW |
|---|---|---|---|---|---|
| Adavisomapura, Kalasapura, Malasamudra villages in Gadag District. | The proposed area is located on the North-East of Betgeri and South of Gadag. This area is spread around Nagasamudra and Adavisomapura and has several peaks. It is held by the following Geographical co-oridinates :- Latitude: 15°21'7"- 15°24'27" N Longitude: 75°36'30"- 75°41'2" E Ridge peaks: 673, 702, 747, 717, 709, 678.3m AMSL. | 27.2 MW | 50.4 MW | 63 Nos. x 800 Kw | 77.6 |

1 M/s. J.N. Investments & Trading Co. Pvt. Ltd. ರವರು 45 ದಿನಗಳ ಒಳಗಾಗಿ ಸರ್ಕಾರಿ ಆದೇಶ ಸಂಖ್ಯೆ ಇಎನ್ 435 ಎನ್‌ಸಿಇ 2011 ದಿನಾಂಕ 06.1.2012 ರನ್ವಯ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದೊಂದಿಗೆ ನಿಯಮಾನುಸಾರ ಒಡಂಬಡಿಕೆ ಮಾಡಿಕೊಳ್ಳತಕ್ಕದ್ದು.

2 M/s. J.N. Investments & Trading Co. Pvt. Ltd. ರವರು ಸಂಬಂಧಿಸಿದ ವಿದ್ಯುತ್ ಸರಬರಾಜು ಕಂಪನಿಯೊಂದಿಗೆ ವಿದ್ಯುತ್ ಖರೀದಿ ಒಡಂಬಡಿಕೆ ಮಾಡಿಕೊಳ್ಳತಕ್ಕದ್ದು.

3 ಸದರಿ ಯೋಜನೆಯನ್ನು ದಿನಾಂಕ : 31.3.2013 ರೊಳಗಾಗಿ ಅನುಷ್ಠಾನಗೊಳಿಸತಕ್ಕದ್ದು.

4 ಈ ಆದೇಶವನ್ನು ರದ್ದು ಪಡಿಸುವ/ಮಾರ್ಪಾಡು ಮಾಡುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎ.ಎ.ಚಪ್ಪರಬಂದ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ,

ಇವರಿಗೆ:
ಸಂಕಲನಕಾರರು, ಸರ್ಕಾರಿ ಮುದ್ರಣಾಲಯ, ಬೆಂಗಳೂರು, ಇವರಿಗೆ ಪ್ರಕಟಣೆಗಾಗಿ.

ಪ್ರತಿ:

1. ಸರ್ಕಾರದ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿಗಳು, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ / ಕಂದಾಯ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು-1.
2. ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ, ಅರಣ್ಯ ಭವನ, 18ನೇ ಕ್ರಾಸ್, ಮಲ್ಲೇಶ್ವರ, ಬೆಂಗಳೂರು.
3. ಉಪ ಅರಣ್ಯ ಸಂರಕ್ಷಣಾಧಿಕಾರಿ ಕೊಪ್ಪಳ ಜಿಲ್ಲೆ, ಕೊಪ್ಪಳ.
4. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಕಾವೇರಿ ಭವನ, ಬೆಂಗಳೂರು-9.
5. ವ್ಯವಸ್ಥಾಪಕ ನಿರ್ದೇಶಕರು, ಗುಲ್ಬರ್ಗಾ ವಿದ್ಯುತ್ ಸರಬರಾಜು ಕಂಪನಿ, ಗುಲ್ಬರ್ಗಾ.
6. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ನಂ. 39, 'ಶಾಂತಿಗೃಹ', ಭಾರತ್ ಸ್ಕೌಟ್ಸ್ & ಗೈಡ್ಸ್ ಬಿಲ್ಡಿಂಗ್, ಅರಮನೆರಸ್ತೆ, ಬೆಂಗಳೂರು-1.
7. ಜಿಲ್ಲಾಧಿಕಾರಿಗಳು, ಕೊಪ್ಪಳ ಜಿಲ್ಲೆ, ಕೊಪ್ಪಳ.
8. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಇಂಧನ ಇಲಾಖೆ.
9. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಇಂಧನ ಇಲಾಖೆ.
10. M/s. J.N. Investments & Trading Co. Pvt. Ltd., ಕೇಸನ್ಸ್ ನಂ.1, ಮೆಹೆರ ಎಸ್ಟೇಟ್, ಎಲ್.ಬಿ.ಎಸ್. ಮಾರ್ಗ್, ವಿಕ್ರೋಲಿ (ವೆಸ್ಟ್) ಮುಂಬಾಯಿ – 400 079.
11. ಶಾಖಾ ಕಡತ / ಕಚೇರಿ ಪ್ರತಿ / ಹೆಚ್ಚುವರಿ ಪ್ರತಿಗಳು.